ಸಂಪುಟ : 10 ಸಂಚಿಕೆ: 145 ಪುಟ : 4+2 ಬೆಲೆ: 3.00 ಶನಿವಾರ ಜುಲೈ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 145 Pages : 4+2 Price : 3.00 Saturday July 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪಂಚ ಗ್ಯಾರಂಟಿ ಯೋಜನೆಗಳ ಜನಸ್ಪಂದನ ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ

# ಟೀಕಿಸಿದವರಿಗೆ ತಕ್ಕ ಉತ್ತರ ನೀಡುತ್ತೇವೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಶುಕ್ರವಾರ ಪಂಚ ಗ್ಯಾರಂಟಿ ಯೋಜನೆಗಳ ಜನಸ್ಪಂದನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಶಕ್ತಿ ಯೋಜನೆಯ ಚರ್ಚೆಯಲ್ಲಿ, ಸಮಿತಿ ಸದಸ್ಯ ಶಿವರಾಜಗೌಡ ಪಾಟೀಲ ಲಕ್ಷ್ಮೇಶ್ವರದ ಸಾರಿಗೆ ಘಟಕದಲ್ಲಿ ಸಿಬ್ಬಂದಿಗೆ ಕಿರುಕುಳ ನೀಡಲಾಗುತ್ತಿದೆ ಎಂದು ಆರೋಪಿಸಿದರು. ಆಗ ಘಟಕ ವ್ಯವಸ್ಥಾಪಕಿ ಸವಿತಾ ಆದಿ ಪ್ರತಿಕ್ರಿಯಿಸಿ, ನಾನು ಯಾವುದೇ ಸಿಬ್ಬಂದಿಗೆ ಕಿರುಕುಳ ನೀಡುತ್ತಿಲ್ಲ. ಯಾರಿಂದಲೂ ಹಣ ಪಡೆಯದೇ ನಿಯತ್ತಿನಿಂದ ನೌಕರಿ ಮಾಡುತ್ತಿದ್ದೇನೆ. ಕಿರುಕುಳ ನೀಡುತ್ತೇನೆ ಎಂದ್ರೆ ಏನ್ರೀ ಅರ್ಥ ಎಂದು ಜೋರು ಧ್ವನಿಯಲ್ಲಿ ಪ್ರಶ್ನಿಸಿದರು. ಆಗ ಸಮಿತಿ ಸದಸ್ಯ ಮತ್ತು ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಇಡೀ ಸಭೆ ಗೊಂದಲದ ಗೂಡಾಯಿತು.

ಸಭೆಯಲ್ಲಿದ್ದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಅವರು ಸಭೆಯಲ್ಲಿದ್ದ ಸಾರಿಗೆ ಇಲಾಖೆ ನಿಯಂತ್ರಣಾಧಿಕಾರಿ ಡಿ.ದೇವರಾಜ ಅವರಿಗೆ ಡಿಪೋ ಮ್ಯಾನೇಜರ್‌ಗೆ ನೋಟೀಸು ನೀಡುವಂತೆ ಸೂಚಿಸಿದರು. ನಂತರ ನಡೆದ ಚರ್ಚೆಯಲ್ಲಿ ಕಳೆದ 11 ತಿಂಗಳಿಂದ ಅನ್ನಭಾಗ್ಯ ಹಣ ಜಮೆಯಾಗಿಲ್ಲ ಎಂದು ಶಿಗ್ಲಿ ನಿವಾಸಿ ಜಗದೀಶ ನವಲೆ ಅಳಲು ತೋಡಿಕೊಂಡರು.

ಪಡಿತರ ಅಂಗಡಿಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಬ್ಯಾನರ್ ಹಾಕಿಸಬೇಕು. ಅನ್ನಭಾಗ್ಯ ಅಕ್ಕಿ ಕಾಳ ಸಂತೆಯಲ್ಲಿ ಎಗ್ಗಿಲ್ಲದೆ ಮಾರಾಟ ಆಗುತ್ತಿದೆ. ಈ ಕುರಿತು ಎಷ್ಟು ಪ್ರಕರಣ ದಾಖಲಿಸಿಕೊಂಡಿದ್ದೀರಿ ಎಂದು ಅಧಿಕಾರಿಯನ್ನು ಪ್ರಶ್ನಿಸಿದ ಬಿ.ಬಿ. ಅಸೂಟಿ, ಅಕ್ಕಿ ಮಾರಾಟ ಮಾಡುವವರ ಪಡಿತರ ಕಾರ್ಡ್‌ಗಳನ್ನು ರದ್ದುಪಡಿಸಿ ಎಂದು ಸೂಚಿಸಿದರು.

ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ರಾಜ್ಯ ಕಾಂಗ್ರೆಸ್ ಪಕ್ಷದ ಪಂಚ ಗ್ಯಾರಂಟಿ ಯೋಜನೆ ಬಡವರ ಜೀವನ ಮಟ್ಟವನ್ನು ಮೇಲ್ಪಂಕ್ತಿಗೇರಿಸಿದೆ. ಪಂಚ ಗ್ಯಾರಂಟಿ ಯೋಜನೆಗಳಿಂದ ಅರ್ಹ ಫಲಾನುಭವಿಗಳು ವಂಚಿತರಾಗಬಾರದು. ಯೋಜನೆಗಳನ್ನು ಬಡವರ ಮನೆಗೆ ತಲುಪಿಸುವ ಕಾರ್ಯವನ್ನು ಸಮಿತಿ ಮಾಡುತ್ತಿದೆ. ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಶೇ.98.02 ಗುರಿ ಸಾಧನೆಯಾಗಿದೆ. 2.49 ಲಕ್ಷ ಕುಟುಂಬಗಳಿಗೆ ಅನ್ನಭಾಗ್ಯ ತಲುಪಿಸಿದ್ದೇವೆ ಎಂದರು.



11 ಕೋಟಿ ಮಹಿಳೆಯರು ಉಚಿತವಾಗಿ ಬಸ್‌ನಲ್ಲಿ ಪ್ರಯಾಣಿಸಿದ್ದು ದೊಡ್ಡ ಸಾಧನೆ. 100ಕ್ಕೆ 100ರಷ್ಟು ಗುರಿ ತಲುಪಲು ಪ್ರಯತ್ನ ಮಾಡಿ ಯೋಜನೆಗಳ ಕುರಿತು ಟೀಕೆ ಮಾಡಿದವರಿಗೆ ತಕ್ಕ ಉತ್ತರ ನೀಡುತ್ತೇವೆ. ಜಿಲ್ಲೆಯ ಏಳೂ ತಾಲೂಕಿನ ಪಂಚ ಗ್ಯಾರಂಟಿಗಳ ಅಧ್ಯಕ್ಷರು ಉತ್ತಮ ಕೆಲಸ ಮಾಡುತ್ತಿದ್ದಾರೆ. ಯೋಜನೆಯಿಂದ ವಂಚಿತರಾದವರನ್ನು ಭೇಟಿ ಮಾಡಿ ಅವರಿಗೂ ಯೋಜನೆ ತಲುಪಿಸುವ ಕೆಲಸ ನಡೆದಿದೆ ಎಂದು ತಿಳಿಸಿದರು.

ತಾ.ಪಂ ಇಓ ಅಧಿಕಾರಿ ಕೃಷ್ಣಪ್ಪ ಧರ್ಮರ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳ 5 ಇಲಾಖೆಗಳ ಅಧಿಕಾರಿಗಳು ಮುಂದಿನ ದಿನಗಳನ್ನು ನಡೆಯುವ ಸಮಿತಿ ಸಭೆಯಲ್ಲಿ ಪ್ರಗತಿ ವರದಿ ಮಂಡಿಸಬೇಕು. ಏನಾದರೂ ಸಮಸ್ಯೆ ಇದ್ದಲ್ಲಿ ತಿಳಿಸಿದರೆ ಅವುಗಳನ್ನು ತಾಲೂಕು ಮತ್ತು ಜಿಲ್ಲಾಧ್ಯಕ್ಷರ ಗಮನಕ್ಕೆ ತರಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ದೀಪಕ ಲಮಾಣಿ, ಸದಸ್ಯರಾದ ರಾಮಣ್ಣ ಲಮಾಣಿ, ಗೀತಾ ಬೀರಣ್ಣವರ, ಕಾರ್ತಿಕ ದೊಡ್ಡಮನಿ, ಪ್ರಕಾಶ ಹುಲಕೋಟಿ, ವಿಜಯ ಹಳ್ಳಿ, ಲಕ್ಷ್ಮೇಶ್ವರ ಪುರಸಭೆ ಆಶ್ರಯ ಸಮಿತಿ ಸದಸ್ಯ ತಿಪ್ಪಣ್ಣ ಸಂಶಿ, ವಿಜಯಕುಮಾರ ಹಳ್ಳಿ, ಸುಶೀಲವ್ವ ಬಡಿಗೇರ ಮತ್ತಿತರರು ಇದ್ದರು.

ಐದೂ ಯೋಜನೆಗಳು ಶೇ.98ರಷ್ಟು ಜನರಿಗೆ ತಲುಪುವಂತೆ ನಮ್ಮ ಸಮಿತಿ ಸದಸ್ಯರು ಮತ್ತು ಕೆಡಿಪಿ ಸದಸ್ಯರು ಮಾಡಿದ್ದೇವೆ. ಇನ್ನೂ ಯೋಜನೆಗಳಿಂದ ವಂಚಿತರಾದವರನ್ನು ಭೇಟಿ ಮಾಡಿ ಸಮಸ್ಯೆಗಳನ್ನು ಪರಿಹರಿಸಿ, ಅವರಿಗೂ ಯೋಜನೆ ಲಾಭ ಮುಟ್ಟಿಸುತ್ತೇವೆ. ಲಕ್ಷ್ಮೇಶ್ವರದ ಬಸ್ ನಿಲ್ದಾಣದಲ್ಲಿ ಶೌಚಾಲಯದ ವ್ಯವಸ್ಥೆ ಸರಿಯಿಲ್ಲ. ವಿಕಲಚೇತನರಿಗೆ ಶೌಚಾಲಯ ಇಲ್ಲ. ಸಿಬ್ಬಂದಿಗಳ ಕೊರತೆಯಿದ್ದು, ಹೆಚ್ಚಿನ ಸಿಬ್ಬಂದಿಗಳನ್ನು ಕೊಡಬೇಕು. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆ ಆಗದಂತೆ ಬಸ್ ಓಡಿಸಲು ಕ್ರಮ ಕೈಗೊಳ್ಳಬೇಕು.

**– ನಾಗರಾಜ ಮಡಿವಾಳರ.**
ಪಂಚ ಗ್ಯಾರಂಟಿ ಯೋಜನೆಗಳ ತಾಲೂಕಾಧ್ಯಕ್ಷ.






## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಕಾಂಗ್ರೆಸ್– ಬಿಜೆಪಿ ಕುರ್ಚಿ ಕದನ ಮತ್ತು ರಾಜಕೀಯ ಅನಿಶ್ಚಿತತೆ

ಕರ್ನಾಟಕ ರಾಜಕಾರಣದಲ್ಲಿ ಸದ್ಯ ಕುರ್ಚಿ ಕದನ ತೀವ್ರಗೊಂಡಿದೆ. ಆಡಳಿತಾರೂಢ ಕಾಂಗ್ರೆಸ್ ಮತ್ತು ವಿರೋಧ ಪಕ್ಷವಾದ ಬಿಜೆಪಿಯ ಆಂತರಿಕ ಬೆಳವಣಿಗೆಗಳು ರಾಜ್ಯ ರಾಜಕಾರಣದಲ್ಲಿ ಅನಿಶ್ಚಿತತೆಯನ್ನು ಸೃಷ್ಟಿಸಿವೆ.

ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಭವಿಷ್ಯದ ಕುರಿತು ಚರ್ಚೆಗಳು ಮುಂದುವರಿದಿವೆ. ಪಕ್ಷದ ಒಳಗಿನ ಅಧಿಕಾರ ಹಂಚಿಕೆ ಸೂತ್ರಗಳು ಈ ಚರ್ಚೆಗಳ ಕೇಂದ್ರ ಬಿಂದುವಾಗಿವೆ. ನಾಯಕತ್ವ ಬದಲಾವಣೆ ಆಗಲಿದೆಯೇ ಅಥವಾ ಸದ್ಯದ ಸ್ಥಿತಿ ಮುಂದುವರಿಯುವುದೇ ಎಂಬುದು ಕುತೂಹಲ ಮೂಡಿಸಿದೆ. ಇದು ಆಡಳಿತದ ಸ್ಥಿರತೆಯ ಮೇಲೆ ಪರಿಣಾಮ ಬೀರಬಹುದು ಎಂಬ ಆತಂಕವೂ ಇದೆ.

ಇತ್ತ ಬಿಜೆಪಿಯಲ್ಲೂ ಪರಿಸ್ಥಿತಿ ಭಿನ್ನವಾಗಿಲ್ಲ. ರಾಜ್ಯಾಧ್ಯಕ್ಷರ ಆಯ್ಕೆ ಪ್ರಕ್ರಿಯೆಯು ಜಟಾಪಟಿಗೆ ಕಾರಣವಾಗಿದೆ. ಹಲವು ಪ್ರಬಲ ನಾಯಕರು ಈ ಹುದ್ದೆಗೆ ಆಕಾಂಕ್ಷಿಗಳಾಗಿದ್ದು, ಪಕ್ಷದ ಹೈಕಮಾಂಡ್ ಯಾರನ್ನು ಆಯ್ಕೆ ಮಾಡುತ್ತದೆ ಎಂಬುದು ನಿರ್ಣಾಯಕವಾಗಿದೆ.

ರಾಜ್ಯಾಧ್ಯಕ್ಷರ ಆಯ್ಕೆ ವಿಳಂಬವು ಪಕ್ಷದ ಸಂಘಟನಾ ಚಟುವಟಿಕೆಗಳಿಗೆ ಹಿನ್ನಡೆ ಉಂಟು ಮಾಡಬಹುದು ಮತ್ತು ಮುಂಬರುವ ಚುನಾವಣೆಗಳಲ್ಲಿ ಪಕ್ಷದ ಸನ್ನದ್ಧತೆಯ ಮೇಲೆ ಪರಿಣಾಮ ಬೀರಬಹುದು.

ರಾಜಕೀಯ ಪಕ್ಷಗಳಲ್ಲಿ ಆಂತರಿಕ ಪ್ರಜಾಪ್ರಭುತ್ವ ಮತ್ತು ನಾಯಕತ್ವದ ಆಯ್ಕೆ ಪ್ರಕ್ರಿಯೆಗಳು ಸಹಜ. ಆದರೆ, ಈ ಆಂತರಿಕ ಕದನಗಳು ಜನಪರ ಆಡಳಿತ ಮತ್ತು ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿಯಾಗಬಾರದು.

ಪ್ರಸ್ತುತ ಸನ್ನಿವೇಶದಲ್ಲಿ, ಉಭಯ ಪಕ್ಷಗಳ ನಾಯಕರು ತಮ್ಮ ವೈಯಕ್ತಿಕ ಮಹತ್ವಾಕಾಂಕ್ಷೆಗಳನ್ನು ಬದಿಗಿಟ್ಟು, ರಾಜ್ಯದ ಅಭಿವೃದ್ಧಿ ಮತ್ತು ಜನರ ಹಿತಾಸಕ್ತಿಗೆ ಆದ್ಯತೆ ನೀಡುವುದು ಅತಿ ಮುಖ್ಯ. ಇಲ್ಲವಾದರೆ, ಕುರ್ಚಿ ಕದನದಲ್ಲಿ ರಾಜ್ಯದ ಪ್ರಗತಿಯೇ ಬಲಿಯಾಗುವ ಅಪಾಯವಿದೆ.

### ಬಸ್ ನಿಲ್ದಾಣದತ್ತ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ

# ಮಹಿಳಾಪರ ಗ್ಯಾರಂಟಿಗಳಿಗೆ ಅಪಾರ ಮೆಚ್ಚುಗೆ

■ವಿಜಯಸಾಕ್ಷಿ ಸುದ್ದಿ, ರೋಣ

ಕಾಂಗ್ರೆಸ್ ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಂದ ಬಡ ಕುಟುಂಬಗಳ ಆರ್ಥಿಕ ಸ್ಥಿತಿ ಸುಧಾರಿಸಲು ಸಾದ್ಯವಾಗಿದೆ. ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಮತ್ತಷ್ಟು ಶಕ್ತಿ ನೀಡಿದಂತಾಗಿದೆ ಎಂದು ರೋಣ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲರಲ್ಲಿ ನೂರಾರು ಮಹಿಳೆಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲರು ಕಳೆದ ಕೆಲ ದಿನಗಳಿಂದ ಪ್ರತಿ ಗ್ರಾಮಗಳಿಗೆ ತೆರಳಿ ಗ್ಯಾರಂಟಿ ಯೋಜನೆಗಳ ಮಹತ್ವ ಮತ್ತು ಕುಟುಂಬಗಳಿಗೆ ಆಗುತ್ತಿರುವ ಅನುಕೂಲತೆಯ ಬಗ್ಗೆ ಸಭೆಗಳನ್ನು ನಡೆಸಿ ಜಾಗೃತಿಯನ್ನು ಮೂಡಿಸುತ್ತಿದ್ದಾರೆ. ಗುರುವಾರ ರೋಣ ಬಸ್ ನಿಲ್ದಾಣದತ್ತ ತೆರಳಿ ಮಹಿಳಾ ಪ್ರಯಾಣಿಕರ ಜೊತೆಗೆ ಶಕ್ತಿ ಯೋಜನೆ ಕುರಿತು ಚರ್ಚೆ ನಡೆಸಿದರು.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳ ಬಗ್ಗೆ ಮಹಿಳೆಯರು ಮೆಚ್ಚುಗೆ ವ್ಯಕ್ತಪಡಿಸುತ್ತಿರುವುದು ನಮಗೆ ಹರ್ಷ ಮೂಡಿಸಿದೆ. ನಾನು ಸಹ ಪ್ರತಿ ಗ್ರಾಮಗಳಿಗೆ ತೆರಳಿ ಗ್ಯಾರಂಟಿ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಿ, ಸಮಸ್ಯೆಗಳಿದ್ದಲ್ಲಿ ಸ್ಥಳದಲ್ಲಿಯೇ ಸರಿಪಡಿಸಿ ಫಲಾನುಭವಿಗಳಿಗೆ ಯೋಜನೆಗಳ ಲಾಭವನ್ನು ತಲುಪುವಂತೆ ಮಾಡಲಾಗುತ್ತಿದೆ.

– ಸಂಗನಗೌಡ ಪಾಟೀಲ.

ಅಧ್ಯಕ್ಷರು, ಗ್ಯಾರಂಟಿ ಸಮಿತಿ–ರೋಣ.



ಈ ಸಂದರ್ಭದಲ್ಲಿ ಬಸ್ ನಿಲ್ದಾಣದಲ್ಲಿದ್ದ ನೂರಾರು ಮಹಿಳೆಯರು ಶಕ್ತಿ ಯೋಜನೆಯಿಂದ ಬಡ ಮಹಿಳೆಯರಿಗೆ ತುಂಬಾ ಅನುಕೂಲವಾಗಿದೆ. ಅಲ್ಲದೆ, ನಿತ್ಯ ಬೇರೆ ಸ್ಥಳಗಳಿಗೆ ತೆರಳಿ ವ್ಯಾಪಾರ–ವಹಿವಾಟು ನಡೆಸುವ ಮತ್ತು ಬಟ್ಟೆ ಅಂಗಡಿಗಳಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರು ಸೇರಿ ಶಾಲಾ–ಕಾಲೇಜು ವಿದ್ಯಾರ್ಥಿನಿಯರಿಗೂ ಯೋಜನೆ ಸಹಕಾರಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಯ ಗೃಹಲಕ್ಷ್ಮೀ, ಗೃಹಜ್ಯೋತಿ, ಶಕ್ತಿ ಯೋಜನೆಗಳಿಂದ ನಮಗೆ ಅನುಕೂಲವಾಗಿದೆ. ಇವತ್ತು ಆರ್ಥಿಕ ಸ್ಥಿತಿ ಸುಧಾರಿಸಲು, ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಲು ಸಹಕಾರಿಯಾಗಿದೆ. ನಾವೆಲ್ಲ ಗ್ರಾಮಗಳಿಗೆ ತೆರಳಿ ಹಣ್ಣು ಮಾರಾಟ ಮಾಡುತ್ತೇವೆ. ಬಸ್ ಪ್ರಯಾಣ ಉಚಿತವಾದಾಗಿನಿಂದ ಬಡವರ್ಗದವರಿಗೆ ಸಹಾಯವಾಗಿದೆ.

– ಮಲ್ಲವ್ವ.

ಗ್ಯಾರಂಟಿ ಯೋಜನೆಯ ಫಲಾನುಭವಿ.

ಗೃಹಲಕ್ಷ್ಮೀ, ಗೃಹ ಜ್ಯೋತಿ ಯೋಜನೆಗಳಿಂದಲೂ ಕುಟುಂಬದ ಆರ್ಥಿಕ ಸ್ಥಿತಿ ಸುಧಾರಿಸಿದೆ. ದುಬಾರಿ ಕಾಲದಲ್ಲಿ ಬಡವರ ಬದುಕು ಹಸನುಗೊಳ್ಳಲು ಗ್ಯಾರಂಟಿ ಯೋಜನೆಗಳು ಲಾಭದಾಯಕವಾಗಿದ್ದು, ಇದರಿಂದ ಮಹಿಳೆಯರಿಗೆ ಕಾಂಗ್ರೆಸ್ ಸರಕಾರ ಶಕ್ತಿ ನೀಡಿದಂತಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಬಗ್ಗೆ ತಮ್ಮ ಹರ್ಷವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅಧಿಕಾರಿಗಳು ಮತ್ತು ಗ್ಯಾರಂಟಿ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಇಂದು ಗದಗ ನಗರಕ್ಕೆ ಸಚಿವ ಪ್ರಿಯಾಂಕ್ ಖರ್ಗೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಜುಲೈ 12 ರಂದು ಬೆಳಿಗ್ಗೆ 7.50 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ರಸ್ತೆಯ ಮೂಲಕ ಹೊರಟು ಬೆಳಿಗ್ಗೆ 9.30 ಗಂಟೆಗೆ ಗದುಗಿಗೆ ಆಗಮಿಸಿ ನಿಗದಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ಸಂಜೆ 5.30 ಗಂಟೆಗೆ ಗದಗಿನಿಂದ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಸಲೀಂ ಅಹ್ಮದ್ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕರಾದ ಸಲೀಂ ಅಹ್ಮದ್ ಅವರು ಜುಲೈ 12 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಇಂತಿದೆ. ಜುಲೈ 12 ರಂದು ಬೆಳಿಗ್ಗೆ 8.43 ಗಂಟೆಗೆ ಗದುಗಿಗೆ ಆಗಮಿಸುವರು. ಬೆಳಿಗ್ಗೆ 11 ಗಂಟೆಗೆ ಗದಗನ ಎಪಿಎಂಸಿ ಯಾರ್ಡ್‌ನಲ್ಲಿ ಇರುವ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜಿಲ್ಲಾ ಯುವ ಕಾಂಗ್ರೆಸ್‌ನ ನೂತನ ಅಧ್ಯಕ್ಷರಾದ ಕೃಷ್ಣಗೌಡ ಎಚ್. ಪಾಟೀಲ ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 2.30 ಗಂಟೆಗೆ ಗದುಗಿನಿಂದ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ನಾಳೆ ಉದಯರಾಗ, ಸಂಧ್ಯಾರಾಗ

■ವಿಜಯಸಾಕ್ಷಿ ಸುದ್ದಿ, ಗದಗ

ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ದಿನಾಂಕ:13.07.2025 ರಂದು ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ವಿ.ಶಿವಾನಂದೀಶ್ವರ ಶಾಸ್ತ್ರಿಗಳು ಹನಮನಾಳ ಮತ್ತು ತಂಡ, ಗದಗ ಇವರಿಂದ ಸುಗಮ ಸಂಗೀತ ಹಾಗೂ ಸಾಯಂಕಾಲ 5.30 ರಿಂದ 6.30 ಗಂಟೆಯವರೆಗೆ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ನೇಗಿನಹಾಳ ಮತ್ತು ತಂಡ ವಿರೇಶ್ವರ ಪುಣ್ಯಾಶ್ರಮ ಗದಗ ಇವರಿಂದ ಸುಗಮ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ನರೇಗಾ ಸಿಬ್ಬಂದಿಗಳ ಚಳುವಳಿ 4ನೇ ದಿನಕ್ಕೆ

■ವಿಜಯಸಾಕ್ಷಿ ಸುದ್ದಿ, ರೋಣ



ಕಳೆದ 6 ತಿಂಗಳ ಬಾಕಿ ವೇತನವನ್ನು ಪಾವತಿಸುವಂತೆ ಒತ್ತಾಯಿಸಿ ನರೇಗಾ ನೌಕರರು ಹಮ್ಮಿಕೊಂಡಿರುವ 4ನೇ ದಿನದ ಅಸಹಕಾರ ಚಳುವಳಿಯ ಸ್ಥಳಕ್ಕೆ ರೋಣ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಭೇಟಿ ನೀಡಿ ಬೆಂಬಲ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, ವೇತನವಿಲ್ಲದೆ ಜೀವನ ನಡೆಸುವುದು ಬಹಳ ಕಷ್ಟಕರವಾದ ಸನ್ನಿವೇಶ. ಉದ್ಯೋಗ ಖಾತ್ರಿ ಯೋಜನೆಯನ್ನು ಅನುಷ್ಠಾನಗೊಳಿಸುವ ನೀವು ಈ ರೀತಿ ವೇತನಕ್ಕಾಗಿ ಮುಷ್ಕರ ಹಮ್ಮಿಕೊಳ್ಳುವಂತೆ ಆಗಬಾರದಿತ್ತು. ಇದು ರಾಜ್ಯಮಟ್ಟದ ತಾಂತ್ರಿಕ ಸಮಸ್ಯೆ ಆಗಿರುವುದರಿಂದ ಹೀಗಾಗಿದೆ. ಆಯುಕ್ತಾಲಯದಿಂದ ವೇತನ ಪಾವತಿಗೆ ಕ್ರಮ ವಹಿಸಲಾಗುತ್ತಿದೆ. ಆದಷ್ಟು ಬೇಗ ನಿಮ್ಮ ವೇತನ ಪಾವತಿಯಾಗಿ ಎಲ್ಲರೂ ಕೆಲಸಕ್ಕೆ ಮರಳುವಂತಾಗಲಿ ಎಂದರು.

ತಾ.ಪಂ ನರೇಗಾ ಆಡಳಿತ ಸಹಾಯಕ ಅರುಣ ಸಿಂಗ್ರಿ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ವೇತನವಿಲ್ಲದೇ ನರೇಗಾ ನೌಕರರು ಎದುರಿಸುತ್ತಿರುವ ಸಂಕಷ್ಟಗಳ ಬಗ್ಗೆ ವಿವರಿಸಿ, ನಮ್ಮ ಬದುಕು ಸದ್ಯ ಬೀದಿಗೆ ಬಂದಿದ್ದು, ಮಾನ್ಯರು ನಮ್ಮ ಬೇಡಿಕೆಯನ್ನು ಆಯುಕ್ತಾಲಯದ ಗಮನಕ್ಕೆ ತನ್ನಿ ಎಂದು ಹೇಳಿದರು.

ರೋಣ ತಾಲೂಕು ಪ್ರತಿನಿಧಿ ಶಾಂತಾ ತಿಮ್ಮರಡ್ಡಿ, ಬಿ.ಎಫ್.ಟಿ ಸಂಘದ ಗೌರವ ಅಧ್ಯಕ್ಷ ಅಶೋಕ ಕಂಬಳಿ, ಗ್ರಾಮ ಕಾಯಕ ಮಿತ್ರ ಪವಿತ್ರಾ ನಾಡಗೌಡ್ರ ಮಾತನಾಡಿದರು.

ನರೇಗಾ ಸಿಬ್ಬಂದಿಗಳಾದ ಅರುಣಕುಮಾರ ತಂಬ್ರಳ್ಳಿ, ವಸಂತ ಅನ್ವರಿ, ಪರಶುರಾಮ ಜಕ್ಕಣ್ಣವರ, ಮಲ್ಲಪ್ಪ ಕಟ್ಟಿಮನಿ, ಉಮೇಶ ಜಕ್ಕಲಿ, ರೇಷ್ಮಾ ಕೆಲೂರ, ಗುರು ಹಿರೇಮಠ, ಮಂಜುಳಾ ಪಾಟೀಲ, ಯಲ್ಲಪ್ಪ ಗೊರವರ, ಪ್ರಕಾಶ್ ಅಂಬಕ್ಕಿ, ಪ್ರಕಾಶ್ ತಳವಾರ, ಈರಣ್ಣ ಬೇಲೇರಿ, ವೀರಣ್ಣ ದಳವಾಯಿ, ಮೌನೇಶ್ ದಂಡಿನ, ಸಿ.ಬಿ. ಮಲ್ಲಗೌಡ್ರ ಮುಂತಾದವರು ಉಪಸ್ಥಿತರಿದ್ದರು.

### ಗದಗ ಜಿಲ್ಲಾ ರಡ್ಡಿ ಸಮಾಜ ಸಂಘ ಹಮ್ಮಿಕೊಂಡಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಶಿವಾನಂದ ಶ್ರೀಗಳು

# ಗುರು ಅಜ್ಞಾನ ಕಳೆದು ಸುಜ್ಞಾನ ಬೆಳಗಿಸಬಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನ ಅಜ್ಞಾನವನ್ನು ದೂರ ಮಾಡಿ, ಸುಜ್ಞಾನದ ಬೆಳಕು ನೀಡುವ ಮೂಲಕ ಎಲ್ಲರನ್ನು ಧರ್ಮದ ಸನ್ಮಾರ್ಗದಲ್ಲಿ ಮುನ್ನಡೆಸಬಲ್ಲ ಅದಮ್ಯ ಶಕ್ತಿ ಗುರುವಿನಲ್ಲಿ ಇದೆ ಎಂದು ಗದುಗಿನ ಶಿವಾನಂದ ಬೃಹನ್ಮಠದ ಪೂಜ್ಯ ಜ. ಅಭಿನವ ಶಿವಾನಂದ ಮಹಾಸ್ವಾಮಿಗಳು ಹೇಳಿದರು.

ಅವರು ಗುರುವಾರ ಗದಗ ಜಿಲ್ಲಾ ರಡ್ಡಿ ಸಮಾಜ ಸಂಘವು ಗುರುಪೂರ್ಣಿಮೆ ಅಂಗವಾಗಿ ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಗುರುವಂದನೆ ಸ್ವೀಕರಿಸಿ ಆಶೀರ್ವಚನ ದಯಪಾಲಿಸಿದರು.

ಎಲ್ಲರ ಜೀವನದಲ್ಲಿ ಗುರುವಿಗೆ ಅತ್ಯಂತ ಮಹತ್ವದ, ಪೂಜ್ಯನೀಯ ಸ್ಥಾನವನ್ನು ನೀಡಲಾಗಿದೆ. ಜನ್ಮ ನೀಡಿದ ತಾಯಿ, ನೆಲೆ ಒದಗಿಸಿದ ಭೂಮಿ ಸ್ವರ್ಗಕ್ಕೂ ಮಿಗಿಲು. ತಾಯಿಯೇ ಮೊದಲ ಗುರು. ಅಂತೆಯೇ ಮಾತೃ ದೇವೋಭವ ಪಿತೃ ದೇವೋಭವ, ಆಚಾರ್ಯ ದೇವೋಭವ ಹಾಗೂ ಅತಿಥಿ ದೇವೋಭವ ಎಂದು ಹೇಳುವ ಮೂಲಕ ಗುರುವಿಗೆ ದೈವೀ ಸ್ವರೂಪ ನೀಡಲಾಗಿದೆ ಎಂದರು.

ಮನುಷ್ಯ ಧರ್ಮದ ಹಾದಿಯಲ್ಲಿ ಮುನ್ನಡೆಯಬೇಕು, ಸತ್ಸಂಗ, ಸಂತರ, ಗುರುವಿನ ಸಂಪರ್ಕದಲ್ಲಿದ್ದರೆ ಅಜ್ಞಾನ ದೂರವಾಗಿ ಸುಜ್ಞಾನವು ಪ್ರಜ್ವಲಿಸುವದು. ನಾವಿಂದು ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಸಂಸ್ಕಾರ, ಸಂಸ್ಕೃತಿಯನ್ನು ರೂಢಿಸಬೇಕು.



ಮಹಾನ್ ಯೋಗಿ ವೇಮನ್ ಹಾಗೂ ಹೇಮರಡ್ಡಿ ಮಲ್ಲಮ್ಮ ಧರ್ಮ ಜಾಗೃತಿ, ವೈಚಾರಿಕ ಜಾಗೃತಿಯೊಂದಿಗೆ ಮನುಷ್ಯನ ಆದರ್ಶಮಯ ಬದುಕಿಗೆ ಬಹು ದೊಡ್ಡ ಮೌಲಿಕ ಸಾಹಿತ್ಯ, ತತ್ವ ಸಂದೇಶಗಳನ್ನು ನೀಡಿದ್ದಾರೆ. ಅವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು. ಅಂದಾಗ ಮಾತ್ರ ನಮ್ಮ ಜೀವನ ಪಾವನ ಆಗಬಲ್ಲದು ಎಂದು ಪೂಜ್ಯ ಜ. ಅಭಿನವ ಶಿವಾನಂದ ಮಹಾಸ್ವಾಮಿಗಳು ಹೇಳಿದರು.

ಅವರಲ್ಲಿ ಆಧ್ಯಾತ್ಮಿಕ, ವೈಚಾರಿಕ ಮತ್ತು ಸಾಂಸ್ಕೃತಿಕ ಪ್ರಜ್ಞೆ ಬೆಳೆದು ಬರುವಂತೆ ತಂದೆ–ತಾಯಿ, ಪೋಷಕರು ಮಾಡಬೇಕು ಎಂದು ಪೂಜ್ಯರು ಹೇಳಿದರು.

ಗದಗ ಜಿಲ್ಲಾ ರಡ್ಡಿ ಸಮಾಜ ಸಂಘದ ಹಿರಿಯರು, ಸಮಾಜ ಬಾಂಧವರು, ಮಹಿಳೆಯರು ಸಂಘಟಿತರಾಗಿ ಪೂಜ್ಯ ಜ. ಅಭಿನವ ಶಿವಾನಂದ ಮಹಾಸ್ವಾಮಿಗಳಿಗೆ ಶ್ರದ್ಧಾಭಕ್ತಿಯೊಂದಿಗೆ ಆರತಿ ಮಾಡಿ, ಗುರುಕಾಣಿಕೆ, ಫಲಪುಷ್ಪಗಳೊಂದಿಗೆ ಗುರುವಂದನೆ ಸಲ್ಲಿಸಿದರು.

ಎಸ್.ಎಚ್. ಶಿವನಗೌಡ್ರ ಸ್ವಾಗತಿಸಿ ನಿರೂಪಿಸಿದರು. ನಿಂಗಪ್ಪ ದೇಸಾಯಿ ಹಾಗೂ ಬಾಬು ಮಲ್ಲನಗೌಡ್ರ ಗುರುಪೂರ್ಣಿಮೆ ಕುರಿತು ಮಾತನಾಡಿದರು. ರಾಘು ಹೊಸಮನಿ ದಂಪತಿಗಳು ಪೂಜ್ಯರ ಪಾದಪೂಜೆ ಮಾಡಿ ಗುರುವಂದನೆ ಸಲ್ಲಿಸಿದರು. ಕೊನೆಗೆ ಮೋಹನ ಕಗದಾಳ ವಂದಿಸಿದರು.

## ಅಲಗಿಲವಾಡ ಶಾಲೆಯಲ್ಲಿ ಹಡಪದ ಅಪ್ಪಣ್ಣ ಜಯಂತಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ ನಿಜಶರಣ ಶ್ರೀ ಹಡಪದ ಅಪ್ಪಣ್ಣನವರ ಜಯಂತ್ಯುತ್ಸವವನ್ನು ಆಯೋಜಿಸಲಾಗಿತ್ತು.

ಪ್ರಧಾನ ಗುರುಗಳಾದ ಹಾಲೇಶ ಜಕ್ಕಲಿ, ಶಿಕ್ಷಕ ನೇಮೇಶ ಯರಗುಪ್ಪಿ ಮಾತನಾಡಿ, ತಮ್ಮ ಕ್ಷೌರಿಕ ಕಾಯಕದಲ್ಲಿ ದೇವರನ್ನು ಕಂಡ ಹಡಪದ ಅಪ್ಪಣ್ಣನವರು ಸಮಾಜದ ಒಳಿತಿಗಾಗಿ ತಮ್ಮನ್ನು ತಾವು ಅರ್ಪಿಸಿಕೊಂಡಿದ್ದಾರೆ. ಹಡಪದ ಎಂದರೆ ಕ್ಷೌರಿಕ ಸಾಮಗ್ರಿಗಳನ್ನು ಇಟ್ಟುಕೊಳ್ಳುವ ಚೀಲ ಅಥವಾ ಎಲೆ ಅಡಿಕೆಯ ತಾಂಬೂಲನ್ನು ಇಟ್ಟುಕೊಳ್ಳುವ ಚೀಲ ಎಂತಲೂ ನಂಬಲಾಗಿದೆ. ಸಾಮಾಜಿಕ ಅಸಾಮಾನತೆ, ಅನ್ಯಾಯದ ವಿರುದ್ಧ ಹೋರಾಡುತ್ತಿದ್ದ ಇವರನ್ನು ಬಸವಣ್ಣನವರು ತಮ್ಮ ಆಪ್ತ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಿಕೊಂಡರು. ಇವರು ಬಸವಪ್ರಿಯ ಕೂಡಲ ಚೆನ್ನಬಸವಣ್ಣ ಎಂಬ ಅಂಕಿತನಾಮದಿಂದ 250 ವಚನಗಳನ್ನು ರಚಿಸಿದ್ದಾರೆ ಎಂದು ಮಕ್ಕಳಿಗೆ ತಿಳುವಳಿಕೆ ನೀಡಿದರು

ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರಾದ ಪ್ರಭಯ್ಯ ಹಸವಿಮಠ, ನಿಜಲಿಂಗಪ್ಪ ಮಾಯಕಾರ, ಅಡುಗೆಯ ಸಿಬ್ಬಂದಿಗಳಾದ ಹುಸೇನಬಿ ನದಾಫ್ ಸೇರಿದಂತೆ ವಿದ್ಯಾರ್ಥಿಗಳಿದ್ದರು.

# ಶಾಂತಿಯುತ ಹೋರಾಟವೇ ನಮ್ಮ ಧ್ಯೇಯ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ಸಿಬ್ಬಂದಿ ವೇತನ ಪಾವತಿಯ ವಿಳಂಬದ ವಿರುದ್ಧ ಕಳೆದ ಐದು ದಿನಗಳಿಂದ ರಾಜ್ಯಾದ್ಯಂತ ನಡೆಯುತ್ತಿರುವ ಅಸಹಕಾರ ಚಳುವಳಿಯ ಭಾಗವಾಗಿ, ಗದಗ ತಾಲೂಕು ಪಂಚಾಯತ್‌ನಲ್ಲಿ ಪ್ರತಿಭಟನೆ 5ನೇ ದಿನಕ್ಕೆ ಮುಂದುವರೆಯಿತು.

ಪ್ರತಿಭಟನೆಯಲ್ಲಿ ಪಾಲ್ಗೊಂಡ ರಾಜ್ಯ ನೇವಾಕ ಸಂಘದ ಜಿಲ್ಲಾ ಪ್ರತಿನಿಧಿ ಕಿರಣಕುಮಾರ ಎಸ್.ಎಚ್. ಮಾತನಾಡಿ, ಕಳೆದ ಐದು ದಿನಗಳಿಂದ ರಾಜ್ಯ ನರೇಗಾ ಕುಟುಂಬದ ಸದಸ್ಯರು ಒಗ್ಗಟ್ಟಿನಿಂದ ಅಹಕಾರ ಚಳುವಳಿ ನಡೆಸುತ್ತಿದ್ದೇವೆ. ಈ ಅಸಹಕಾರ ಚಳುವಳಿಯಿಂದ ವೇತನ ಪಾವತಿ ಪ್ರಕ್ರಿಯೆಯ ವೇಗ ಹೆಚ್ಚುತ್ತಿದೆ. ಆದರೂ ಕಡಿಮೆ ಮೊತ್ತದ ಈಖಿಔ (ಫಂಡ್ ಟ್ರಾನ್ಸ್‌ಫರ್ ಆರ್ಡರ್) ರಚನೆಯ ಪ್ರಕ್ರಿಯೆ ಯಶಸ್ವಿಯಾಗಿದೆ. ವೇತನ ಪಾವತಿಗೆ ಸಂಬಂಧಿಸಿದ ಈಖಿಔ ಸೃಜನೆ ಬಗ್ಗೆ ಜಿಲ್ಲಾ ಪಂಚಾಯಿತಿಯಿಂದ ಕ್ರಮ ವಹಿಸಲಾಗುತ್ತಿದೆ ಎಂದರು.



ಜಿಲ್ಲಾ ಪಂಚಾಯಿತಿ ಐಇಸಿ ಸಂಯೋಜಕ ವೀರಭದ್ರಪ್ಪ ಸಜ್ಜನ ಮಾತನಾಡಿ, ಕಳೆದ ಅರು ತಿಂಗಳಿಂದ 130ಕ್ಕೂ ಹೆಚ್ಚು ಸಿಬ್ಬಂದಿಗಳಿಗೆ ವೇತನ ಪಾವತಿಯಾಗಿಲ್ಲ. ಈ ಅಸಹಕಾರ ಚಳುವಳಿಯಿಂದಾಗಿ ಸರ್ಕಾರದ ಗಮನ ಸೆಳೆಯಲಾಗಿದೆ. ರಾಜ್ಯ ಪಿಡಿಒ ಕ್ಷೇಮಾಭಿವೃದ್ಧಿ ಸಂಘ, ರಾಜ್ಯ ಗ್ರಾ.ಪಂ ಜನಪ್ರತಿನಿಧಿಗಳ ಕ್ಷೇಮಾಭಿವೃದ್ಧಿ ಸಂಘ ಮತ್ತು ರಾಜ್ಯ ಡಿಇಓ ಸಂಘದಂತಹ ಹಲವು ಸಂಘಟನೆಗಳ ಬೆಂಬಲದೊಂದಿಗೆ ನಾವು ಒಗ್ಗಟ್ಟಾಗಿ ಮುಂದುವರಿಯುತ್ತೇವೆ ಎಂದರು.

ಪ್ರತಿಭಟನೆಯಲ್ಲಿ ಮಹೇಶ್ ಚಿತವಾಡಗಿ, ಬಸವರಾಜ ಮಣ್ಣಮನವರ, ಮೋಹನ ಹೊಂಬಳ, ಚಂದ್ರು ಹಳ್ಳಿ, ನವೀನ ಬಸರಿ, ಅಜಯ ಅಬ್ಬಿಗೇರಿ, ಮಂಜುನಾಥ ತಳವಾರ, ಮಂಜುನಾಥ ಕುಲಕರ್ಣಿ, ವಿರೇಶ ಪಟ್ಟಣಶೆಟ್ಟಿ, ಸಚಿನ ಭುಡಾರಿ, ಪ್ರಶಾಂತ ಯಾವಗಲಮಠ, ತಾಲೂಕಿನ ಬಿ.ಎಫ್.ಟಿಗಳು ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನಾಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ಕನಕ ನೌಕರರ ಸಂಘದಿಂದ ಜು.13ರಂದು ಬೆಳಿಗ್ಗೆ 10.30ಕ್ಕೆ ಪಟ್ಟಣದ ಚನ್ನಮ್ಮನ ವನ ಕಲ್ಯಾಣ ಮಂಟಪದಲ್ಲಿ ತಾಲೂಕು ಹಾಲುಮತ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರು, ಸಾಧಕರಿಗೆ ಸನ್ಮಾನ ಹಾಗೂ ತಾಲೂಕು ಕನಕ ನೌಕರರ ಪತ್ತಿನ ಸಹಕಾರ ಸಂಘದ ಉದ್ಘಾಟನಾ ಸಮಾರಂಭ ಜರುಗಲಿದೆ.

ಧಾರವಾಡ ರೇವಣ ಸಿದ್ದೇಶ್ವರ ಮಹಾಮಠದ ಡಾ. ಬಸವರಾಜ ದೇವರು ಹಾಗೂ ಹುಲ್ಲೂರಿನ ಶ್ರೀ ಸಿದ್ದಯ್ಯ ಅಮೋಘಿಮಠ ಹಾಗೂ ಸಾನ್ನಿಧ್ಯ ವಹಿಸುವರು. ಶಾಸಕ ಡಾ. ಚಂದ್ರು ಲಮಾಣಿ ಸಮಾರಂಭ ಉದ್ಘಾಟಿಸುವರು. ಕನಕ ಪತ್ತಿನ ಸಹಕಾರ ಸಂಘದ ಉದ್ಘಾಟನೆಯನ್ನು ಶಾಂತಪ್ಪ (ಐಎಎಸ್) ನೆರವೇರಿಸುವರು.

ಅಧ್ಯಕ್ಷತೆಯನ್ನು ಲಕ್ಷ್ಮೇಶ್ವರ ತಾಲೂಕು ಕನಕ ನೌಕರರ ಸಂಘದ ಅಧ್ಯಕ್ಷ ಮಂಜುನಾಥ ಕೊಕ್ಕರಗುಂದಿ ವಹಿಸುವರು. ಬೆಂಗಳೂರಿನ ಇನ್‌ಸೈಟ್ ಅಕಾಡೆಮಿ ಸಂಸ್ಥಾಪಕ ಜಿ.ಬಿ. ವಿನಯಕುಮಾರ ಉಪನ್ಯಾಸ ನೀಡುವರು. ಅತಿಥಿಗಳಾಗಿ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಸೇರಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಜನಪ್ರತಿನಿಧಿಗಳು ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

### ಅಡವೀಂದ್ರ ಮಠದ ಶಿವಾನುಭವ ಗೋಷ್ಠಿಯಲ್ಲಿ ಮಹೇಶ್ವರ ಸ್ವಾಮೀಜಿ ನುಡಿ

# ಭಕ್ತರಿಗೆ ಸನ್ಮಾರ್ಗ ತೋರುವವನೇ ನಿಜವಾದ ಗುರು

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯ ಸಹಜ ಜೀವಿ. ತನ್ನ ಬದುಕಿನ ಹಲವಾರು ಜಂಜಾಟಗಳಿಂದ ತಲ್ಲಣಗೊಂಡ ಅವನಿಗೆ ಜೀವನದ ಸರಿಯಾದ ಮಾರ್ಗ ಹಾಗೂ ಗುರಿ ಬೇಕು. ಇದಕ್ಕಾಗಿ ಗುರುವನ್ನು ಆತ ನಂಬುತ್ತಾನೆ. ಭಕ್ತರ ಮನದ ಗೊಂದಲಗಳಿಗೆ ಉತ್ತಮ ಸನ್ಮಾರ್ಗ ತೋರುವವನೇ ಗುರು ಎಂದು ಗದುಗಿನ ಅಡವೀಂದ್ರ ಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಹೇಳಿದರು.

ಅವರು ಶ್ರೀ ಮಠದಲ್ಲಿ ಜರುಗಿದ 336ನೇ ಮಾಸಿಕ ಶಿವಾನುಭವ ಗೋಷ್ಠಿಯ ಸಮ್ಮುಖ ವಹಿಸಿ ಮಾತನಾಡುತ್ತಿದ್ದರು.

ಮನುಷ್ಯ ತನ್ನ ಜೀವನದಲ್ಲಿ ದಾನ-ಧರ್ಮದಂತಹ ಪರೋಪಕಾರಿ ಗುಣಗಳೊಂದಿಗೆ ಮಾನವೀಯತೆ, ಸಹಕಾರಗಳನ್ನು ಬೆಳೆಸಿಕೊಳ್ಳಬೇಕು. ಗುರು ಹಿರಿಯರ, ಪೂಜ್ಯರ ನುಡಿಗಳು ಬದುಕನ್ನು ಬದಲಿಸಬಲ್ಲವು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲಾ ಸಂಸ್ಕಾರ ಭಾರತಿ ಅಧ್ಯಕ್ಷ ಪಿ.ಎ. ಕುಲಕರ್ಣಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸಂಸ್ಕಾರಗಳು ಹಾಗೂ ಸಂಸ್ಕೃತಿಗಳು ಮರೆಯಾಗುತ್ತಿವೆ. ಬಾಲ್ಯದಲ್ಲಿಯೇ ಮಕ್ಕಳಿಗೆ ಸಂಸ್ಕಾರವನ್ನು ಹೇಳಿಕೊಡಬೇಕು. ಗುರುವಿನ ಮಹತ್ವದ ಕುರಿತು ಯುವ ಪೀಳಿಗೆ ತಿಳಿಯಬೇಕು. ಅಂದಾಗ ಸುಂದರ ಸಮಾಜ ನಿರ್ಮಾಣವಾಗಬಲ್ಲದು ಎಂದರು.




ಇನ್ನೋರ್ವ ಅತಿಥಿಗ ವಿದ್ವಾನ ಸಂಜಯ ಶಾನಭೋಗರ ಮಾತನಾಡಿ, ಕಲೆ ಮನುಷ್ಯನಿಗೆ ಸಂತೋಷ ಉಂಟುಮಾಡಬಲ್ಲದು. ಕಲೆಯಿಂದಾಗಿ ಅನೇಕ ಕುಟುಂಬಗಳು ಆರ್ಥಿಕ ಸದೃಢತೆ ಕಂಡಿವೆ. ಅದಕ್ಕಾಗಿ ಕಲೆ ಹಾಗೂ ಕಲಾವಿದರನ್ನು ಗೌರವಿಸಿ ಪ್ರೋತ್ಸಾಹಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಇತ್ತೀಚೆಗೆ ನಿಧನರಾದ ಬಸವರಾಜ ಗಿಡ್ನಂದಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಪಂಚಾಕ್ಷರಿ ಅಣ್ಣಿಗೇರಿ, ನಿವೃತ್ತ ಪ್ರಾಚಾರ್ಯ ಸಿ.ಅಂಗಾರಡ್ಡಿ, ಶಾಂತಾ ಗೌಡರ, ವಿದ್ಯಾ ಆನಂದ ಪಾಟೀಲ, ಜಯಶ್ರೀ ಮಾಳಗಿ, ಬಿ.ಎಮ್. ಬಿಳೇಯಲಿ, ಎಲ್.ಎಸ್. ನೀಲಗುಂದ, ನಿಂಗಪ್ಪ ಬಳಿಗಾರ, ಬಿ.ಎಂ. ಯಾಮನಶೆಟ್ಟಿ, ಪ್ರಾಚಾರ್ಯ ಬಿ.ಬಿ. ಪಾಟೀಲ ಉಪಸ್ಥಿತರಿದ್ದರು. ಸಿದ್ಧಣ್ಣ ಜವಳಿ ಪ್ರಾರ್ಥಿಸಿದರು, ಪಿ.ಸಿ. ಪಾಟೀಲ ಸ್ವಾಗತಿಸಿದರು. ಪ್ರಕಾಶ ಬಂಡಿ ನಿರೂಪಿಸಿ ವಂದಿಸಿದರು.

ಗುರುಪೂರ್ಣಿಮೆ ಕುರಿತು ಉಪನ್ಯಾಸ ನೀಡಿದ ಗದಗ ತಾಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ದತ್ತಾತ್ರೇಯ ಜೋಶಿ, ಗುರುವಿನ ಶಕ್ತಿ ಅತ್ಯದ್ಭುತವಾದುದು. ಬದುಕಿನ ಪರಿಪೂರ್ಣತೆಗೆ ಬೆಳಕಿನ ರೂಪದಲ್ಲಿ ಸುಜ್ಞಾನವನ್ನು ಕೊಡುತ್ತಾನೆ. ಹರ ಮುನಿದರೂ ಗುರು ಕಾಯುವನು ಎಂಬ ಮಾತು ಇದೆ. ಅದಕ್ಕಾಗಿ ನಾವು ಗುರುವಿನ ಅಣತಿಯನ್ನು ಪಾಲಿಸಬೇಕು ಎಂದರು.

# ಓದುವ ಸಂಸ್ಕೃತಿ ಹೆಚ್ಚಿಸುವ ಪುಸ್ತಕ ದಾಸೋಹ



■ವಿಜಯಸಾಕ್ಷಿ ಸುದ್ದಿ, ಗದಗ

ಓದುವ ಸಂಸ್ಕೃತಿಯನ್ನೇ ಮರೆತಿರುಬಹುದಾದ ಈಗಿನ ವಿದ್ಯಾರ್ಥಿಗಳಲ್ಲಿ ಮತ್ತೆ ಓದುವ ಸಂಸ್ಕೃತಿಯನ್ನು ಹೆಚ್ಚಿಸಬೇಕು. ಪುಸ್ತಕದ ಮೂಲಕ ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ ಬೆಳೆಸಬೇಕು ಎನ್ನುವ ದಿಶೆಯಲ್ಲಿ ಕಲಾ ವಿಕಾಸ ಪರಿಷತ್ತಿನವರು ಹಮ್ಮಿಕೊಂಡಿರುವ ಈ ಪುಸ್ತಕ ದಾಸೋಹ ಕಾರ್ಯಕ್ರಮ ಅಭಿನಂದನಾರ್ಹವಾದುದು ಎಂದು ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಪ್ರೊ. ಡಾ. ಎಸ್.ವಾಯ್. ಚಿಕ್ಕಟ್ಟಿ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಗದುಗಿನ ಕಲಾ ವಿಕಾಸ ಪರಿಷತ್ ಚಿಕ್ಕಟ್ಟಿ ಸಮೂಹ ಶಿಕ್ಷಣ ಸಂಸ್ಥೆಯ ಸಭಾ ಭವನದಲ್ಲಿ ಏರ್ಪಡಿಸಿದ್ದ ಕಲಾ ವಿಕಾಸ ಪುಸ್ತಕ ದಾಸೋಹಕ್ಕೆ ಚಾಲನೆ ನೀಡಿ ಮಾತನಾಡಿದರು.

ವಿಭೂತಿ ಮಾಸಪತ್ರಿಕೆ ಸಂಪಾದಕ ಅಂದಾನೆಪ್ಪ ವಿಭೂತಿ ಮಾತನಾಡಿ, ಪುಸ್ತಕ ಓದುವುದರಿಂದ ವಿದ್ಯಾರ್ಥಿಗಳಿಗೆ ಉಂಟಾಗುವ ಲಾಭಗಳು, ಪುಸ್ತಕಗಳ ಮಹತ್ವ, ನಿರಂತರ ಓದು ವ್ಯಕ್ತಿಯ ಬದುಕನ್ನು ಹೇಗೆ ಬದಲಿಸಬಲ್ಲದು ಎಂಬುದನ್ನು ತಿಳಿಸಿದರು.

ಪುಸ್ತಕ ದಾಸೋಹದ ರೂವಾರಿ ಕಲಾ ವಿಕಾಸ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಸಿ.ಕೆ.ಎಚ್. ಶಾಸ್ತ್ರಿ ಕಡಣಿ ಪುಸ್ತಕ ದಾಸೋಹದ ಆಶಯವನ್ನು ತಿಳಿಸಿ, 25 ವರ್ಷಗಳಿಂದ ಕಲಾ ವಿಕಾಸ ಪರಿಷತ್ತಿನ ಅಡಿಯಲ್ಲಿ ಕಲೆಯನ್ನು ಸಾರ್ವತ್ರಿಕಗೊಳಿಸಿ ಕಲಾ ಪ್ರತಿಭೆಗಳನ್ನು ಪರಿಚಯಿಸಿದ ಮತ್ತು ನಾಡಿನ ಉದ್ದಗಲಕ್ಕೂ ಮಾತ್ರವಲ್ಲದೆ ದೇಶದಾದ್ಯಂತ ಕಲಾ ಸೇವೆ ಸಲ್ಲಿಸಿದ ಪರಿಷತ್‌ನ ಪರಿಚಯ ಮಾಡಿಕೊಟ್ಟರು.

ಇದೇ ಸಂದರ್ಭದಲ್ಲಿ ಖಾಸಗಿ ಸುದ್ದಿ ವಾಹಿನಿಯಿಂದ 'ರಿಯಲ್ ಸ್ಟಾರ್' ರಾಜ್ಯಪ್ರಶಸ್ತಿ ಪಡೆದ ನಿಮಿತ್ತ ಪ್ರೊ. ಎಸ್. ವಾಯ್. ಚಿಕ್ಕಟ್ಟಿಯವರನ್ನು ಮತ್ತು ಎಸ್.ಎಸ್.ಎಲ್.ಸಿ ಕನ್ನಡ ಮಾಧ್ಯಮದಲ್ಲಿ ಶೇ.98 ಅಂಕ ಪಡೆದ ವಿದ್ಯಾರ್ಥಿ ಸಾರಿಕಾ ಕಾಲವಾಡಮಠರನ್ನು ಪರಿಷತ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಮುಖ್ಯಾಧ್ಯಾಪಕಿ ಶೋಭಾ ಸ್ಥಾವರಮಠ ಸ್ವಾಗತಿಸಿದರು. ಬಡಿಗೇರ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಕಪ್ಪತ್ತಗುಡ್ಡದ ಸಂರಕ್ಷಣೆಗೆ ಬದ್ಧರಾಗಬೇಕಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶುದ್ಧ ಹವಾಗುಣಕ್ಕೆ ದೇಶದಲ್ಲಿಯೇ ಹೆಸರಾಗಿರುವ ಗದಗ ಜಿಲ್ಲೆಯ ಕಪ್ಪತ್ತಗುಡ್ಡದ ಸಂರಕ್ಷಣೆಗೆ ನಾವೆಲ್ಲರೂ ಬದ್ಧರಾಗಿರಬೇಕು ಎಂದು ಗದಗ ಎಪಿಎಂಸಿ ಯಾರ್ಡ್‌ನ ವಾಯು ವಿಹಾರ ಬಳಗದ ಅಧ್ಯಕ್ಷ ಚನ್ನವೀರಪ್ಪ ಹುಣಶೀಕಟ್ಟಿ ಹೇಳಿದರು.

ವಾಯು ವಿಹಾರ ಬಳಗ ಕಳಸಾಪೂರದ ಶ್ರೀಗುರು ರಾಘವೇಂದ್ರ ಮಠದಿಂದ ಸುಕ್ಷೇತ್ರ ವೆಂಕಟಾಪೂರದ ಶ್ರೀ ವೆಂಕಟೇಶ್ವರ ದೇವಸ್ಥಾನದವರೆಗೆ ಕೈಗೊಂಡಿದ್ದ ಪಾದಯಾತ್ರೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಹಲವಾರು ಪ್ರವಾಸಿ ತಾಣಗಳಿದ್ದು, ಅವುಗಳಲ್ಲಿ ಕಪ್ಪತ್ತಗುಡ್ಡವೂ ಒಂದಾಗಿದೆ. ಇಂತಹ ರಮಣೀಯ ನಿಸರ್ಗಧಾಮ ನಮ್ಮ ಭಾಗದಲ್ಲಿರುವದು ನಮ್ಮ ಹೆಮ್ಮೆ. ತಿರುಪತಿ ಶ್ರೀ ವೆಂಕಟೇಶ ದೇವಾಲಯದ ದರ್ಶನ ಪಡೆಯಲಾಗದವರು ಗದಗ ತಾಲೂಕಿನ ವೆಂಕಟಾಪೂರದ ವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದು ಧನ್ಯರಾಗಬೇಕೆಂದು ಹಿರಿಯರು ಹೇಳುತ್ತಾರೆ. ಆ ಹಿನ್ನೆಲೆಯಲ್ಲಿ ನಾವೆಲ್ಲ ವಾಯು ವಿಹಾರ ಬಳಗದವರು ಪಾದಯಾತ್ರೆ ಕೈಗೊಂಡಿದ್ದೇವೆ ಎಂದರು.



ವಾಯು ವಿಹಾರ ಬಳಗದ ಪ್ರಕಾಶ ಉಗಲಾಟದ, ಬಾಬುಗೌಡ ಮಲ್ಲನಗೌಡ್ರ, ಮುರುಘರಾಜೇಂದ್ರ ಬಡ್ನಿ, ರಾಜು ಮಲ್ಲಾಡದ ಮುಂತಾದವರು ಮಾತನಾಡಿದರು.

ರಮೇಶ ಶಿಗ್ಲಿ ಪ್ರಾರ್ಥಿಸಿದರು, ಮಧುಸೂಧನ ಪುಣೇಕರ ಸ್ವಾಗತಿಸಿದರು. ಸಂಜಯ ಬಾಗಮಾರ ನಿರೂಪಿಸಿದರು. ಕೊನೆಗೆ ವಿಶ್ವನಾಥ ಯಳಮಲಿ ವಂದಿಸಿದರು.

ಪಾದಯಾತ್ರೆಯಲ್ಲಿ ತಾತನಗೌಡ ಪಾಟೀಲ, ಮಹಾಂತೇಶ ಪಾಟೀಲ, ಶರಣು ಗದಗ, ಮೌಲಾವಲಿ ಮುಲ್ಲಾನವರ, ಚಂದ್ರು ಸುರಕೋಡ, ವಿಜಯ ಶಿವಪ್ಪಗೌಡ್ರ, ಸಿದ್ಧಣ್ಣ ಹಲವಾಗಲಿ, ಅರವಿಂದ ಕಾಮತ, ಅಶೋಕಗೌಡ ಪಾಟೀಲ, ಮಂಜುನಾಥ ಬೇಲೇರಿ, ಸಿದ್ಧಣ್ಣ ಮುನವಳ್ಳಿ, ರಾಜು ಮಲ್ಲಾಡದ, ರೇಣುಕಪ್ರಸಾದ ಹಿರೇಮಠ, ಬಾಪುಗೌಡ ಸಂಕನಗೌಡ್ರ, ಸುರೇಶ ರಡ್ಡೇರ, ಉಮೇಶ ನಾಲವಾಡ, ಮಹಾಂತೇಶ ಬಾತಾಖಾನಿ, ಚಿಕ್ಕನಗೌಡ್ರ, ಶರಣಪ್ಪಗೌಡ ಪವಾಡಿಗೌಡ್ರ ಮುಂತಾದವರಿದ್ದರು.


# 'ಮಾಸದ ಮಾತು' 25ನೇ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗುರುಭಕ್ತಿಯೇ ಗುರಿಯನ್ನು ಜಯಿಸುವ ಶಕ್ತಿ. ಜನಿಸಿದಾಗ ಮೂಳೆ-ಮಾಂಸದ ತಡಿಕೆಯಂತಿರುವ ನಮಗೆ ತಾಯಿಯೇ ಮೊದಲ ಗುರು. ತಂದೆ ಬದುಕನ್ನು ತೋರುತ್ತಾನೆ. ಶಿಕ್ಷಕರು ಐಹಿಕ ಗುರುಗಳಾದರೆ, ಆಧ್ಯಾತ್ಮಿಕ ಗುರುಗಳು ಬದುಕುವ ಬಗೆಯನ್ನು ಕಲಿಸುತ್ತಾರೆ ಎಂದು ಶರಣ ಚಿಂತಕ, ಪ್ರಗತಿಪರ ಕೃಷಿಕ ಬಸವರಾಜ ಬೆಂಡಿಗೇರಿ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಕೆಳಗಿನ ಬಸ್ತಿಬಣದ ಈಶ್ವರ ದೇವಸ್ಥಾನದ ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ 'ಮಾಸದ ಮಾತು' ಸರಣಿಯ 25ನೇ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕ ಶ್ರೀಪಾಲ ಘೋಂಗಡಿ ಉಪನ್ಯಾಸ ನೀಡಿ, 'ಅಕ್ಷರ ಮಾತ್ರಂ ಕಲಿಸಿದಾತಂ ಗುರು' ಎನ್ನುವಂತೆ ಪ್ರತಿಯೊಂದು ಹಂತದಲ್ಲಿ ವಿವಿಧ ರೀತಿಯಿಂದ ನಮಗೆ ಮಾರ್ಗದರ್ಶನ ಮಾಡಿದ ಪ್ರತಿಯೊಬ್ಬರೂ ಗುರು ಸಮಾನರಾಗುತ್ತಾರೆ. ಕೆಲವರು ವೃತ್ತಿಯನ್ನು ಕಲಿಸಿದರೆ, ಕೆಲವರು ಬದುಕಿನ ರೀತಿಯನ್ನು ತಿಳಿಸಿಕೊಡುತ್ತಾರೆ. ಆ ಎಲ್ಲ ಗುರುಗಳನ್ನು ಸ್ಮರಿಸುವ ದಿನವೇ ಈ ಗುರುಪೂರ್ಣಿಮೆ ಎಂದರು.





ಪುರಸಭೆಯ ಮಾಜಿ ಉಪಾಧ್ಯಕ್ಷ ಗುರುಪುತ್ರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಸಾಪ ತಾಲೂಕು ಘಟಕದ ಅಧ್ಯಕ್ಷ ಈಶ್ವರ ಮೆಡ್ಲೇರಿ ಅಧ್ಯಕ್ಷೀಯ ನುಡಿಗಳನ್ನಾಡಿದರು. ಹಿರಿಯ ಅಧ್ಯಾತ್ಮ ಚಿಂತಕರಾದ ಪಾಪಣ್ಣ ಬನ್ನಿ, ಈರಣ್ಣ ಶಿರೋಳ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಸಿದ್ದಣ್ಣ ಹಡಪದ, ಸುನೀಲ ಮೆಡ್ಲೇರಿ ಹಾಗೂ ಶ್ರೀನಿಧಿ ಶಿಳ್ಳಿನ ಗುರುಗೀತ ನಮನ ಕಾರ್ಯಕ್ರಮ ನಡೆಸಿಕೊಟ್ಟರು.

ಕಸಾಪ ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ಸ್ವಾಗತಿಸಿದರು. ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ನಿರೂಪಿಸಿದರು. ಶಂಕರ ಶಿಳ್ಳಿನ ವಂದಿಸಿದರು. ಈ ಸಂದರ್ಭದಲ್ಲಿ ಈರಣ್ಣ ಗಾಣಿಗೇರ, ಶರಣಪ್ಪ ಯಲಿವಿಗಿ, ಈಶ್ವರ ಬನ್ನಿಕೊಪ್ಪ, ಬಸವರಾಜ ಮೆಡ್ಲೇರಿ, ಕೊಟ್ರೇಶ ಅಳವಂಡಿ, ಲಕ್ಷ್ಮಣ ಮೆಡ್ಲೇರಿ, ನಾಗರಾಜ ಗುಜರಿ, ಈರಣ್ಣ ರಿತ್ತಿ, ಎಚ್.ಎಂ. ಸಪ್ಪಿನ, ಮಹಾಬಲೇಶ್ವರ ಮೆಡ್ಲೇರಿ, ತಿಪ್ಪಣ್ಣ ಹಡಪದ, ಮಂಜುನಾಥ ಮೆಡ್ಲೇರಿ, ನಾರಾಯಣ ಮೆಡ್ಲೇರಿ ಮುಂತಾದವರು ಉಪಸ್ಥಿತರಿದ್ದರು.

# ನಿಸ್ವಾರ್ಥ ಸಂಘಟನೆಯಿಂದ ಹಿಂದವೀ ಸ್ವರಾಜ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಭು ಶ್ರೀರಾಮನು ರಾವಣನ ವಿರುದ್ಧ ವಾನರಸೇನೆಯ ಸಂಘಟನೆ ನಿರ್ಮಿಸಿದರು. ಛತ್ರಪತಿ ಶಿವಾಜಿ ಮಹಾರಾಜರು ಹಿಂದೂಗಳ ಮೇಲೆ ಆಕ್ರಮಣ ಮಾಡುವ ಇಸ್ಲಾಮೀ ಸುಲ್ತಾನರ ವಿರುದ್ಧ ಸಾಮಾನ್ಯ ಮಾವಳೆಗಳ ಸಂಘಟನೆಯನ್ನು ಮಾಡಿ ಹಿಂದವೀ ಸ್ವರಾಜ್ಯವನ್ನು ಸ್ಥಾಪಿಸಿದರು. ಈ ಸಂಘಟನೆಯು ಧರ್ಮಕ್ಕಾಗಿ ತ್ಯಾಗ ಮಾಡುವ ಪ್ರೇರಣಾದಾಯಿ ವಿಚಾರದ ಮೇಲೆ ಆಗಿತ್ತು. ಇಂತಹ ನಿಸ್ವಾರ್ಥ ಸಂಘಟನೆ ನಿರ್ಮಾಣವಾದಾಗಲೇ ನಿಜವಾದ ಅರ್ಥದಲ್ಲಿ ರಾಮರಾಜ್ಯ ಮತ್ತು ಹಿಂದವೀ ಸ್ವರಾಜ್ಯ ಸಾಕಾರಗೊಳ್ಳುತ್ತದೆ ಎಂದು ಹಿಂದೂ ಜನಜಾಗೃತಿ ಸಮಿತಿಯ ಯಮನಪ್ಪ ಭಜಂತ್ರಿ ಹೇಳಿದರು.



ಅವರು ನಗರದ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ನಡೆದ ಗುರುಪೂರ್ಣಿಮಾ ಮಹೋತ್ಸವದಲ್ಲಿ ಮಾತನಾಡುತ್ತಿದ್ದರು.

ಪ್ರಸ್ತುತ ಹಿಂದೂ ಸಮಾಜದ ಮೇಲೆ ಅನೇಕ ರೀತಿ ಆಘಾತಗಳಾಗುತ್ತಿವೆ. ಹಿಂದೆ ಪ್ರಭು ಶ್ರೀರಾಮರ ಕಾಲದಲ್ಲಿ, ಶಿವಾಜಿ ಮಹಾರಾಜರ ಕಾಲದಲ್ಲಿ, ಹಕ್ಕ ಬುಕ್ಕರ ಕಾಲದಲ್ಲಿ ಇದೇ ರೀತಿ ಧರ್ಮಸಂಕಟಗಳು ಎದುರಾಗಿದ್ದವು.

ಈ ಎಲ್ಲ ಸಂದರ್ಭಗಳಲ್ಲಿಯೂ ಅವರು ಗುರುಗಳ ಮಾರ್ಗದರ್ಶನ ಪಡೆದು ಧರ್ಮಸಂಸ್ಥಾಪನೆಯ ಕಾರ್ಯ ಮಾಡಿದ್ದಾರೆ. ಹಾಗಾಗಿ ಗುರು-ಶಿಷ್ಯ ಪರಂಪರೆಗೆ ಹಿಂದಿನಿಂದಲೂ ಅಷ್ಟೇ ಮಹತ್ವವಿದೆ. ಈಗ ನಾವೂ ಸಹ ಇಂದಿನ ಗುರುಪೂರ್ಣಿಮೆಯ ದಿನ ಧರ್ಮಸಂಸ್ಥಾಪನೆಗಾಗಿ ಸಂಘಟಿತರಾಗಲು ಸಂಕಲ್ಪ ಮಾಡಬೇಕಿದೆ ಎಂದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಮುಖ್ಯರಾದ ಶ್ರೀಪತಿ ಭಟ್ ಮಾತನಾಡಿ, ಸನಾತನ ಧರ್ಮ ಮತ್ತು ಸಂಸ್ಕೃತಿಯನ್ನು ಉಳಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಅದನ್ನು ಮುಂದಿನ ಪೀಳಿಗೆಯವರು ಪಾಲಿಸಬೇಕಾದರೆ ಈಗಿನಿಂದಲೇ ಒಗ್ಗಟ್ಟಾಗಿ ಕಾರ್ಯ ಮಾಡಬೇಕಿದೆ ಎಂದರು.

## ನಿಧನ

### ಶಂಕ್ರಪ್ಪ ಅಣ್ಣಿಗೇರಿ

ಗದಗ, 11. ಗದುಗಿನ ಪಂಚಾಕ್ಷರ ನಗರದ ನಿವಾಸಿ, ನಿವೃತ್ತ ಮುಖ್ಯೋಪಾಧ್ಯಾಯ, ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಉಪಾಧ್ಯಕ್ಷರಾಗಿದ್ದ ಶಂಕ್ರಪ್ಪ ಗುರಪ್ಪ ಅಣ್ಣಿಗೇರಿ (76) ಶುಕ್ರವಾರ ಸಂಜೆ ನಿಧನರಾದರು. ಪತ್ನಿ, ಓರ್ವ ಪುತ್ರ, ನಾಲ್ವರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಬಿಟ್ಟು ಅಗಲಿರುವ ಮೃತರ ಅಂತಿಮಯಾತ್ರೆಯು ಶನಿವಾರ ಮುಂಜಾನೆ 11 ಗಂಟೆಗೆ ಗದುಗಿನ ಪಂಚಾಕ್ಷರ ನಗರದ 4ನೇ ಅಡ್ಡರಸ್ತೆಯಲ್ಲಿರುವ ಮೃತರ ನಿವಾಸದಿಂದ ಹೊರಟು ಗದುಗಿನ ವೀರಶೈವ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ಜರುಗಲಿದೆ.



ಸಂತಾಪ: ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಹಾಗೂ ಪದಾಧಿಕಾರಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

# ಗುರುಗಳು ನಮ್ಮ ಜೀವನದ ಅವಿಭಾಜ್ಯ ಅಂಗ

■ವಿಜಯಸಾಕ್ಷಿ ಸುದ್ದಿ, ಗದಗ

ಗುರುಪೂರ್ಣಿಮೆಗೆ ಧಾರ್ಮಿಕ ಹಾಗೂ ಶೈಕ್ಷಣಿಕ ಮಹತ್ವವಿದೆ. ಗುರು ಎಂದರೆ ಅಂಧಕಾರ, ಅಜ್ಞಾನವನ್ನು ದೂರ ಮಾಡುವವರು ಎಂಬ ನಂಬಿಕೆ ಬಹುತೇಕರದ್ದು. ಗುರುಗಳು ನಮ್ಮ ಜೀವನದ ಅವಿಭಾಜ್ಯ ಅಂಗ ಎಂಬ ನಂಬಿಕೆಯಿಂದ ನಾವೆಲ್ಲ ಜೀವನ ನಡೆಸುತ್ತಿದ್ದೇವೆ ಎಂದು ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪ.ಪೂ ಕಲ್ಲಯ್ಯಜ್ಜನವರು ಹೇಳಿದರು.

ಅವರು ಗುರುವಾರ ಗದಗ ಜಿಲ್ಲಾ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಸಂಘಟನೆಯಿಂದ ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲಿ ಜರುಗಿದ ಗುರುವಂದನೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಜೀವನದಲ್ಲಿ ಸರಿಯಾದ ಮಾರ್ಗ ತೋರಬಲ್ಲವನೇ ಗುರು. ಈ ಎರಡಕ್ಷರದಲ್ಲಿ ಗುರು-ಶಿಷ್ಯರ ಬಾಂಧವ್ಯವಿದೆ. ಮನುಷ್ಯನ ಸಾವಿರಾರು ತೊಂದರೆಗಳಿಗೆ ಸರಿಯಾದ ಮಾರ್ಗಗಳನ್ನು, ನ್ಯಾಯ-ನೀತಿ, ಧರ್ಮ-ಸಂಸ್ಕೃತಿಯ ಹಾದಿಯನ್ನು ತೋರಿ ಅವರನ್ನು ಸದ್ವಿಚಾರಿಗಳನ್ನಾಗಿ ಮಾಡುವವನೇ ಗುರುವಾಗಿದ್ದಾನೆ ಎಂದರು.




ಗದಗ ಜಿಲ್ಲಾ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಅಧ್ಯಕ್ಷೆ ಸುಮಾ ಪಾಟೀಲ ಮಾತನಾಡಿ, ಮನುಷ್ಯನ ಭವದ ತೊಂದರೆಗಳಿಗೆ ಸರಿಯಾದ ಬೋಧನೆಯ ಮೂಲಕ ಸೂಕ್ತವಾದ ದಾರಿಯನ್ನು ತೋರಿ, ಉತ್ತಮರನ್ನಾಗಿ ಮಾಡುವ ಕೆಲಸ ಗುರುವಿನಿಂದ ನಡೆಯುತ್ತದೆ ಎಂದರು.

ನಿರ್ಮಲಾ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಶಿಕಲಾ ಮಾಲೀಪಾಟೀಲ ಹಾಗೂ ಮಾಧುರಿ ಮಾಳೆಕೊಪ್ಪ ಪ್ರಾರ್ಥಿಸಿದರು. ಅಶ್ವಿನಿ ಮಾದಗುಂಡಿ ಸ್ವಾಗತಿಸಿದರು. ಚಂದ್ರಕಲಾ ಸ್ಥಾವರಮಠ ನಿರೂಪಿಸಿದರು. ಪ್ರಿಯಾಂಕಾ ಹಳ್ಳಿ ನಿರೂಪಿಸಿದರು. ವಿದ್ಯಾ ಶಿವನಗುತ್ತಿ ವಂದಿಸಿದರು.

ಕಾರ್ಯಕ್ರಮದಲ್ಲಿ ಮಧು ಕರಿಬಿಷ್ಠಿ, ರೇಖಾ ರೊಟ್ಟಿ, ಸುಷ್ಮಿತಾ ವೇರ್ಣಕರ, ಸುಗ್ಗಲಾ ಯಳಮಲಿ, ಶೋಭಾ ಹಿರೇಮಠ, ಶ್ರೀದೇವಿ ಮಹೇಂದ್ರಕರ, ಪದ್ಮಿನಿ ಮುಂತಾದವರು ಉಪಸ್ಥಿತರಿದ್ದರು.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಜುಲೈ 12 ಹಾಗೂ 13 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಪ್ರವಾಸದ ವಿವರ ಇಂತಿದೆ.

ಜುಲೈ 12 ರಂದು ಬೆಳಿಗ್ಗೆ 07.30 ಗಂಟೆಗೆ ಹುಬ್ಬಳ್ಳಿಯಿಂದ ಗದಗಿಗೆ ಆಗಮಿಸುವರು. ಬೆಳಿಗ್ಗೆ 11 ಗಂಟೆಗೆ ನಗರದ ವಿವೇಕಾನಂದ ಸಭಾಭವನದಲ್ಲಿ ಯುವಧ್ವನಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಪ್ರವಾಸಿ ಮಂದಿರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ವಾಸ್ತವ್ಯ ಮಾಡುವರು.

ಜುಲೈ 13 ರಂದು ಬೆಳಿಗ್ಗೆ 10 ಗಂಟೆಗೆ ಹಳೆ ಕೋರ್ಟ್ ಹಿಂಬಾಗದ ಡಿಸಿಮಿಲ್ ರಸ್ತೆಯಲ್ಲಿ ಏರ್ಪಡಿಸಿದ ಗದಗ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಭೂಮಿ ಪೂಜೆ ಕಾರ್ಯಕ್ರಮ ಹಾಗೂ ಹುಲಕೋಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕೊಠಡಿಗಳು, ಶೌಚಾಲಯ, ಗ್ರಂಥಾಲಯ ಹಾಗೂ ಇತರೆ ಕಾಮಗಾರಿಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬೆಳಿಗ್ಗೆ 10:30 ಗಂಟೆಗೆ ಗದಗ ಬೆಟಗೇರಿ ಹೆಲ್ತ್ ಕ್ಯಾಂಪ್ ನಲ್ಲಿ ಶ್ರೀಶಂಕರಮಠ ಸೇವಾ ಸಮಿತಿ (ರಿ) ಗದಗ ಜಿಲ್ಲಾ ಇವರು ನಿರ್ಮಾಣ ಮಾಡಿರುವ ಸಮುದಾಯ ಭವನದ ಮೊದಲನೇ ಮಹಡಿಯ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ನಿಜ ಸುಖಿ ಸಮುದಾಯ ಭವನ, ಶ್ರೀನಗರ ಕಾಮತರ ಲೇಔಟ್ ನಲ್ಲಿ ಏರ್ಪಡಿಸಿದ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘ ಗದಗ ಅವರಿಂದ ಹಡಪದ ಶ್ರೀ ಅಪ್ಪಣ್ಣನವರ 891ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಗ್ಗೆ 11:30 ಗಂಟೆಗೆ ಗದಗ ನಗರದ ಡಾ. ಬಿ ಆರ್ ಅಂಬೇಡ್ಕರ್ ಸಭಾಭವನದಲ್ಲಿ ಗದಗ ಜಿಲ್ಲಾ ಚನ್ನದಾಸರ ಸಮಾಜ ಬಾಂಧವರಿಂದ ಪ್ರತಿಭಾ ಪುರಸ್ಕಾರ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### 'ತುರ್ತು ಪರಿಸ್ಥಿತಿ ಕರಾಳ ದಿನ' ನೆನಪು ಕಾರ್ಯಕ್ರಮ ಉದ್ಘಾಟಿಸಿದ ಕೇಂದ್ರ ಸಚಿವ ಪ್ರಹ್ಲಾದ ಜೋಶಿ

# ಕಾಂಗ್ರೆಸ್‌ನಿಂದ ಸಂವಿಧಾನವನ್ನು ದುರ್ಬಲಗೊಳಿಸುವ ಪ್ರಯತ್ನ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಪ್ರಭುತ್ವವನ್ನು ಬಲಪಡಿಸಲು, ಕಾಂಗ್ರೆಸ್‌ನ ನಿಜವಾದ ಡಿಎನ್‌ಎಯನ್ನು ಜನರಿಗೆ ತಿಳಿಸಲು ಬಿಜೆಪಿ ತುರ್ತು ಪರಿಸ್ಥಿತಿ ಕರಾಳ ದಿನ ನೆನಪು ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಪ್ರಜಾಪ್ರಭುತ್ವವನ್ನು ತನ್ನ ಹಿಡಿತದಲ್ಲಿಟ್ಟುಕೊಳ್ಳುವ ಉದ್ದೇಶದಿಂದ ಕಾಂಗ್ರೆಸ್ ಪಕ್ಷ ಸಂವಿಧಾನವನ್ನು ದುರ್ಬಲಗೊಳಿಸುವ ಪ್ರಯತ್ನಗಳನ್ನು ಹಿಂದಿನಿಂದಲೂ ಮಾಡುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಆರೋಪಿಸಿದರು.

ನಗರದ ವಿಠಲಾರೂಢ ಸಮುದಾಯ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ 'ತುರ್ತು ಪರಿಸ್ಥಿತಿ ಕರಾಳ ದಿನ' ನೆನಪು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕಾಂಗ್ರೆಸ್ ಡಿಎನ್‌ಎಯಲ್ಲಿ ಪ್ರಜಾಪ್ರಭುತ್ವದ ಕೊರತೆ ಮೊದಲ ಬಾರಿಗೆ ಬೆಳಕಿಗೆ ಬಂದಿದ್ದು 1971ರಲ್ಲಿ. ಅಲಹಾಬಾದ್ ಹೈಕೋರ್ಟ್ ಇಂದಿರಾ ಗಾಂಧಿಯವರ ಗೆಲುವನ್ನು ಅನೂರ್ಜಿತಗೊಳಿಸಿ, ಆರು ವರ್ಷಗಳ ಕಾಲ ಚುನಾವಣೆಗಳಲ್ಲಿ ಸ್ಪರ್ಧಿಸದಂತೆ ಆದೇಶಿಸಿತು. ನಂತರ, ಇಂದಿರಾ ಗಾಂಧಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದರು. ಸುಪ್ರೀಂ ಕೋರ್ಟ್ ಮಧ್ಯಂತರ ತೀರ್ಪಿನಲ್ಲಿ ಇಂದಿರಾ ಗಾಂಧಿ ಚುನಾವಣೆಯಲ್ಲಿ ಸ್ಪರ್ಧಿಸಬಹುದಾದರೂ ಮತ ಚಲಾಯಿಸುವಂತಿಲ್ಲ ಎಂದು ಹೇಳಿತು. ಇಂದಿರಾ ಗಾಂಧಿ ಇದರಿಂದ ವಿಚಲಿತರಾಗಿ, ಸಂವಿಧಾನದ 38, 40, 41ನೇ ಕಲಂಗಳಿಗೆ ತಿದ್ದುಪಡಿ ತಂದು, ತಮ್ಮ ಆಯ್ಕೆಯನ್ನು ಪ್ರಶ್ನಿಸಲು ಸಾಧ್ಯವಾಗದಂತೆ ಚಕ್ರವ್ಯೂಹ ರಚಿಸಿದರು ಎಂದು ಹೇಳಿದರು.



1975ರ ಜೂನ್ 25ರಂದು ತುರ್ತು ಪರಿಸ್ಥಿತಿ ಹೇರಲಾಯಿತು. ಇಂದಿರಾ ಗಾಂಧಿ ಹಿಟ್ಲರ್‌ನಂತೆ ವರ್ತಿಸಿದರು. 2.23 ಲಕ್ಷ ಜನರನ್ನು ಬಂಧಿಸಲಾಯಿತು. ಜನರನ್ನು ಬೌದ್ಧಿಕ ಆಘಾತಕ್ಕೆ ಒಳಪಡಿಸಲಾಯಿತು ಎಂದು ಜೋಶಿ ನೆನಪಿಸಿಕೊಂಡರು.

ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಇಂದಿರಾ ಗಾಂಧಿಯವರ ಗೆಲುವು ಅಸಂವಿಧಾನಿಕ ಎಂದು ಅಲಹಾಬಾದ್ ಕೋರ್ಟ್ ತೀರ್ಪು ನೀಡಿತ್ತು. ಆದರೆ, ಇಂದಿರಾ ಗಾಂಧಿ ದಬ್ಬಾಳಿಕೆ ಮೂಲಕ ತುರ್ತು ಪರಿಸ್ಥಿತಿ ಹೇರಿದ್ದರು. ಅವರ ನಂತರ ಅವರ ಪುತ್ರರು ಸಂತಾನ ಹರಣ ಯೋಜನೆ ಜಾರಿ ಮಾಡುವ ಮೂಲಕ ಭಾರತದ ಜನಸಂಖ್ಯೆಯನ್ನು ಕಡಿಮೆ ಮಾಡುವಂತೆ ಮಾಡಿದರು. ಸಂವಿಧಾನ ಹತ್ಯೆ ಮಾಡಿದವರು ಕಾಂಗ್ರೆಸ್ ಪಕ್ಷದ ಮುಖಂಡರು. ಈಗ ಸಂವಿಧಾನ ರಕ್ಷಿಸಿ ಎಂದು ಡಾಂಭಿಕತನ ಪ್ರದರ್ಶಿಸುತ್ತಿದ್ದಾರೆ ಎಂದು ಟೀಕಿಸಿದರು.

ತುರ್ತು ಪರಿಸ್ಥಿತಿಯಲ್ಲಿ ಜೈಲುವಾಸ ಅನುಭವಿಸಿದ್ದ ಕೃಷ್ಣ ಹೊಂಬಾಳಿ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಪ್ರಮುಖರಾದ ಲಿಂಗರಾಜ ಪಾಟೀಲ, ಎಂ.ಎಸ್. ಕರಿಗೌಡ್ರ, ಮಹೇಂದ್ರ ಕೌತಾಳ, ಮಂಜುನಾಥ ಮುಳಗುಂದ, ಮೋಹನ ಮಾಳಶೆಟ್ಟಿ, ಎಂ.ಎಂ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

ಯಶ್ ಅವರ ಕಟೌಟ್ ಕಟ್ಟುವ ವೇಳೆ ನಡೆದ ಘಟನೆಯಿಂದ ಆತ್ಮೀಯ ಗೆಳೆಯರ ಸಾವು ನಮ್ಮಲ್ಲಿ ನೋವನ್ನುಂಟು ಮಾಡಿದೆ. ಯಶ್ ಬಗ್ಗೆ ಅವರಿಗೆ ಅಪಾರವಾದ ಪ್ರೀತಿಯಿತ್ತು. ನಟ ಯಶ್ ಅವರು ಮೃತ ಗೆಳೆಯರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಬೇಕು. ನವೀನ ಮತ್ತು ಮುರಳಿ ಪ್ರಾಣ ಸ್ನೇಹಿತರಾಗಿದ್ದರು. ಜೀವನುದ್ದಕ್ಕೂ ಒಂದಾಗಿದ್ದ ಅವರು ಸಾವಿನಲ್ಲೂ ಒಂದಾದರು. ಗೆಳೆಯರ ಕುಟುಂಬಕ್ಕೆ ಭಗವಂತ ನೋವು ಸಹಿಸುವ ಶಕ್ತಿ ಕೊಡಲಿ.

– ಪ್ರಕಾಶ ಮ್ಯಾಗೇರಿ.
ಗಾಯಾಳು ಯುವಕ.

# ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರಿ ಶಾಲೆಗಳಲ್ಲಿ ಉಚಿತ ಶಿಕ್ಷಣದೊಂದಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸುವ ನಿಟ್ಟಿನಲ್ಲಿ ಆಳುವ ಎಲ್ಲ ಸರ್ಕಾರಗಳು ನಿರಂತರ ಪುನಶ್ಚೇತನಗೊಳಿಸುವ ಕಾರ್ಯ ಮಾಡುತ್ತಲೇ ಬಂದಿವೆ. ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ ಸರ್ಕಾರಿ ಶಾಲೆಗಳ ಬಲವರ್ಧನೆಗೆ ಕೈಜೋಡಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶುಕ್ರವಾರ ಯಲ್ಲಾಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ವಿವೇಕ ಕೊಠಡಿ ಯೋಜನೆಯಡಿ 34.30 ಲಕ್ಷ ರೂಗಳಲ್ಲಿ 2 ಕೊಠಡಿ ನಿರ್ಮಾಣ ಕಾಮಗಾರಿಗೆ




ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚಳವಾಗಬೇಕು ಮತ್ತು ಶಿಕ್ಷಣದ ಗುಣಮಟ್ಟದ ಎತ್ತರಕ್ಕೇರಬೇಕಾದಲ್ಲಿ ಮೊದಲ ಆದ್ಯತೆಯಾಗಿ ಹೆಚ್ಚಿನ ಅನುದಾನ, ಸೌಲಭ್ಯಗಳನ್ನು ಕಲ್ಪಿಸುವುದು ಮುಖ್ಯವಾಗಿದೆ. ಅದಕ್ಕೆ ತಕ್ಕಂತೆ ಶಿಕ್ಷಕರು ಸಮರ್ಪಣಾ ಮನೋಭಾವದಿಂದ ಸೇವೆ ಸಲ್ಲಿಸಬೇಕು. ಪಾಲಕರೂ ಸಹ ಇಂಗ್ಲೀಷ್ ಮೀಡಿಯಂ ವ್ಯಾಮೋಹ ಬಿಟ್ಟು ಗ್ರಾಮೀಣ ಭಾಗದ ಕನ್ನಡ ಶಾಲೆಗಳನ್ನು ಉಳಿಸುವ ಕಾರ್ಯ ಮಾಡಬೇಕು ಎಂದರು.

ಈ ವೇಳೆ ದೊಡ್ಡೂರ ಗ್ರಾ.ಪಂ ಅಧ್ಯಕ್ಷ ಚಂದ್ರಶೇಖರ ಈಳಿಗೇರ, ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷ ಮಂಜಣ್ಣ ಅಂಗಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ನಾಣಕಿ ನಾಯಕ, ಮಹಾಂತಗೌಡ ಭರಮಗೌಡ್ರ, ತುಕ್ಕಪ್ಪ ಪೂಜಾರ, ಸಕ್ರಪ್ಪ ಕಡೆಮನಿ, ಫಕ್ಕೀರಗೌಡ ಭರಮಗೌಡ್ರ, ಮಹಾಂತೇಶ ಹರಕುಣಿ, ಹನುಮಂತಪ್ಪ ಲಮಾಣಿ, ರಾಮಣ್ಣ ಲಮಾಣಿ, ಕಿರಣ ಲಮಾಣಿ, ಕುಮಾರ ಲಮಾಣಿ, ಮಹಾಂತೇಶ ಮತ್ತೂರು, ಶಿವಪ್ಪ ಅಕ್ಕೂರ, ಸುನೀಲ ಲಮಾಣಿ, ಡಾಕಪ್ಪ ಲಮಾಣಿ, ರವಿ ಭಜಕ್ಕನವರ, ಎಫ್.ಎಚ್. ತಿಮ್ಮಾಪುರ, ಮಹೇಶ ಅಥಣಿ, ಯು.ಜಿ. ಹುಚ್ಚಯ್ಯನಮಠ, ಫಕ್ಕೀರೇಶ ಕಟಗಿ, ಮುಖ್ಯೋಪಾಧ್ಯಾಯ ಬಿ.ಎನ್. ಗಾಯಕವಾಡ, ಶಿಕ್ಷಕರು ಇದ್ದರು.

# ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯ ಲಲಿತಾ ಕಲಾ ಸಂಸ್ಥೆಯ ವಿಜಯ ಪ್ರಾಥಮಿಕ ಶಾಲೆ, ವಿಜಯ ವಾಣಿಜ್ಯ ಪದವಿಪೂರ್ವ ವಿದ್ಯಾಲಯಗಳಲ್ಲಿ ಗುರುಪೂರ್ಣಿಮ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಸಂಸ್ಥೆಯ ಅಧ್ಯಕ್ಷ ಅಶೋಕ ಅಕ್ಕಿ ಮಾತಾನಾಡಿ, ವಿದ್ಯಾರ್ಥಿಗಳು ಮೊಬೈಲ್ ಬಳಕೆ ಕಡಿಮೆ ಮಾಡಬೇಕು. ಏಕಾಗ್ರತೆಯಿಂದ ಪುಸ್ತಕ ಓದುವ ಮತ್ತು ವಿವಿಧ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು ಎಂದರು.

ಸಂಸ್ಥೆಯ ಕಾರ್ಯದರ್ಶಿ ಸಂತೋಷ ಅಕ್ಕಿ ಮಾತನಾಡಿ, ಸನಾತನ ಕಾಲದಲ್ಲಿ ಗುರು–ಶಿಷ್ಯ ಪರಂಪರೆಯ ಬಗ್ಗೆ ಮತ್ತು ಹಿಂದಿನ ಗುರುಕುಲ ಪದ್ಧತಿ, ಈಗಿನ ಶೈಕ್ಷಣಿಕ ಪದ್ಧತಿಗಳನ್ನು ವಿವರಿಸಿದರು. ಸಾಗರಿಕಾ. ಎಸ್ ಅಕ್ಕಿ ಹಾಗೂ ಪದವಿ ಮಹಾವಿದ್ಯಾಲಯದ ಡಾ. ಸಿ.ವಿ. ಬಡಿಗೇರ, ಪೂರ್ವ ಪದವಿ ಮಹಾವಿದ್ಯಾಲಯದ ಶಿಲ್ಪಾ ಮಲ್ಲಾಪೂರ, ಪೂರ್ವ ಪ್ರಾಥಮಿಕ ಮುಖ್ಯೋಪಾಧ್ಯಾಯೆ ರೇಖಾ ಮಲೇಕರ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯೆ ಭಾಗ್ಯಲಕ್ಷ್ಮೀ ಶೇಷಗಿರಿ ಮತ್ತು ಸಂಸ್ಥೆಯ ಸಿಬ್ಬಂದಿಯವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರೊ. ರವಿಚಂದ್ರ ಸ್ವಾಗತಿಸಿದರು. ಪ್ರೊ. ವೀರೇಶ ಬನಿಕಟ್ಟಿ ನಿರೂಪಿಸಿದರು. ಪ್ರೊ. ಅರುಣಕುಮಾರ ವಂದಿಸಿದರು.




VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka